**ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹಾವೇರಿ.**

**ಸಿ.ಸಿ.ನಂ.118/2019**

| | | | |
|---|---|---|---|
| ಸಾಕ್ಷಿದಾರರ ಹೆಸರು | ನಜೀರಅಹ್ಮದ ಹುಬ್ಬಳ್ಳಿ | ಸಿಡಬ್ಲ್ಯೂ | 3 |
| ತಂದೆ ಹೆಸರು | ಮಹ್ಮದಗೌಸ | ಪಿಡಬ್ಲ್ಯೂ | 2 |
| ವಯಸ್ಸು | 50 ವರ್ಷ | | |
| ಉದ್ಯೋಗ | ಗಾರೆ ಕೆಲಸ | | |
| ವಾಸಸ್ಥಳ | ಬೆನಕನಹಳ್ಳಿ ತಾಃ ಹಾವೇರಿ | | |

**ದಿಃ 25.09.2023 ರಂದು ಸಾಕ್ಷಿದಾರರನ್ನು ಕರೆಯಿಸಿ, ಪ್ರಮಾಣ ವಚನ ಬೋಧಿಸಲಾಯಿತು.**
**ಮುಖ್ಯ ವಿಚಾರಣೆಃ ಹಿ.ಸ.ಸ.ಅಭಿಯೋಜಕರಿಂದ.**

**1).** ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಿದ್ದು ಅದರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ದಾಖಲೆಯು ಸ್ಥಳ ಪಂಚನಾಮೆಯಾಗಿದ್ದು, ಅದನ್ನು ಈಗಾಗಲೇ ನಿ.ಪಿ-1 ಎಂದು ಗುರುತಿಸಲ್ಪಟ್ಟಿದೆ. ಸಾಕ್ಷಿಯ ಸಹಿಯನ್ನು ನಿ.ಪಿ-1(ಬಿ) ಎಂದು ಗುರುತಿಸಲಾಯಿತು. ನಿ.ಪಿ-2 ಮತ್ತು ನಿ.ಪಿ-3 ಪೋಟೋಗಳಲ್ಲಿ ತಾನು ಇರುವದಾಗಿ ಒಪ್ಪಿಕೊಂಡಿರುತ್ತಾರೆ. ಮೂರು-ನಾಲ್ಕು ವರ್ಷಗಳ ಹಿಂದೆ ಪೊಲೀಸರು ಬಂದು ಚಾ.ಸಾ-1 ರವರ ಮನೆಯನ್ನು ತೋರಿಸಿ ಎಂದು ಕೇಳಿದರು, ಆಗ ಚಾ.ಸಾ-1 ರವರ ಮನೆಯನ್ನು ತೋರಿಸಿದ್ದೇನೆ. ಆಗ ಸಹಿ ಮಾಡಿದ್ದೇನೆ. ಆಗ ಒಂದು ಪೋಟೋ ತೆಗೆದಿದ್ದಾರೆ, ಇನ್ನೊಂದು ಪೋಟೋವನ್ನು ಶಿಬಾರದ ಹತ್ತಿರ ತೆಗೆದಿರುತ್ತಾರೆ. ಪೊಲೀಸರು ಏನು ಮಾಡಿದ್ದರು ಎಂದು ಗೊತ್ತಿಲ್ಲ. ನಾನು ಸಹಿ ಮಾಡಿದ ದಾಖಲೆಯಲ್ಲಿ ಏನು ಬರೆದಿದ್ದಾರೆ ಎಂದು ಗೊತ್ತಿಲ್ಲ. ಈ ಕೇಸಿನ ಬಗ್ಗೆ ನನಗೆ ಯಾವುದೇ ವಿಚಾರ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದರಿಂದ, ಪರಿಶೀಲಿಸಿ ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಹಿ.ಸ.ಸ.ಅಭಿಯೋಜಕರಿಂದ.**

**2)** ಚಾ.ಸಾ**-1** ರವರ ಮನೆಯ ಬಳಿ ಪಂಚನಾಮೆ ಮಾಡಿದರು ಅಂದರೆ ಸರಿ.

**ಪಾಟೀ ಸವಾಲುಃ ಶ್ರೀ.ಎಸ್.ಎನ್.ಹೆಚ್ ವಕೀಲರು ಪಾಟೀ ಸವಾಲು ಇರುವದಿಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೇ. ಸರಿ ಇದೆ.
ಎಂದು ಒಪ್ಪಿರುತ್ತಾರೆ.

ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು
ಹಾವೇರಿ.